## ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಅಧೀಕ್ಷಕರುಗಳಿಗೆ ಗೆಜೆಟೆಡ್ ಮ್ಯಾನೇಜರ್ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ದಿನಾಂಕ :27.02.2019 ಹಾಗೂ ದಿನಾಂಕ :15.05.2019ರ ಸಂಖ್ಯೆ :ಸಿಆಸುಇ/186/ಎಸ್ಆರ್ಎಸ್/2018ರ ಆದೇಶಗಳು.
2. ಈ ಕಛೇರಿ ದಿನಾಂಕ:03.06.2022ರ ಸಂಖ್ಯೆ:ಕಾಶಿಇ/14/ಅಧೀಕ್ಷಕಕರು/ಜೇಪಾ/2021-22/ಬಸ್ಥಾವಿ, ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ರಾಜ್ಯವ್ಯಾಪಿ ಉಳಿಕೆ ಮೂಲವೃಂದ ಹಾಗೂ ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ಅಧೀಕ್ಷಕರುಗಳ ಅಂತಿಮ ಜೇಷ್ಠತಾ ಪಟ್ಟಿ.
3. ದಿನಾಂಕ:24.06.2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು .

** ** **

**ಪ್ರಸ್ತಾವನೆ:**

ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಗೆಜೆಟೆಡ್ ಮ್ಯಾನೇಜರ್ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ಶೇಕಡ 100ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ (2)ರ ಪತ್ರದೊಂದಿಗೆ ಪ್ರಕಟಿಸಿರುವ ಈ ಇಲಾಖೆಯ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ ಅಧೀಕ್ಷಕರುಗಳ ಹಾಗೂ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ ಅಧೀಕ್ಷಕರುಗಳ ಅಂತಿಮ ಜೇಷ್ಠತಾ ಪಟ್ಟಿಯ ಆಧಾರದ ಮೇಲೆ ಗೆಜೆಟೆಡ್ ಮ್ಯಾನೇಜರ್ ವೃಂದದ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ:24.06.2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿ ಇರುವ ಗೆಜೆಟೆಡ್ ಮ್ಯಾನೇಜರ್ ಹುದ್ದೆಗಳನ್ನು ಜೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ ಅಧೀಕ್ಷಕರುಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಯಿತು.

ಈ ಹಿಂದೆ ದಿನಾಂಕ:28.06.2022ರಂದು ಸಮ ಸಂಖ್ಯೆ ಆದೇಶದಲ್ಲಿ 08 ಅರ್ಹ ಅಧೀಕ್ಷಕರುಗಳಿಗೆ ಗೆಜೆಟೆಡ್ ಮ್ಯಾನೇಜರ್ ಹುದ್ದೆಗೆ ಬಡ್ತಿ ನೀಡಲಾಗಿತ್ತು. ಈ ಕೆಳಕಂಡ 03 ಅಧೀಕ್ಷಕರುಗಳಾದ ಶ್ರೀಮತಿಯರಾದ ನೇತ್ರಾವತಿ ಆರ್, ರಾಜೇಶ್ವರಿ.ಬಿ.ಪಾಟೀಲ್ ಮತ್ತು ಶ್ರೀ.ಗೋವಿಂದರಾಜು ಎನ್.ವಿ ಇವರುಗಳು ಬಡ್ತಿಯನ್ನು ತಾತ್ಕಾಲಿಕವಾಗಿ ತಿರಸ್ಕರಿಸಿರುತ್ತಾರೆ. ಸದರಿ ಸಿಬ್ಬಂದಿಗಳು ಬಡ್ತಿಯನ್ನು ತಿರಸ್ಕರಿಸಿರುವುದರಿಂದ ಮ್ಯಾನೇಜರ್ ವೃಂದದಲ್ಲಿ 03 ಖಾಲಿ ಹುದ್ದೆಗಳು ಲಭ್ಯವಾಗಿರುತ್ತದೆ.

ಸರ್ಕಾರಿ ಕಲಾ ಕಾಲೇಜು, ಹಾಸನ ಇಲ್ಲಿ ಮ್ಯಾನೇಜರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ.ಧರ್ಮಪ್ಪ ಬಿ.ಎಸ್ ಇವರು ಸಹಾಯಕ ನಿರ್ದೇಶಕರಾಗಿ ಬಡ್ತಿ ಹೊಂದಿದ ಪ್ರಯುಕ್ತ 01 ಮ್ಯಾನೇಜರ್ ಹುದ್ದೆ ಖಾಲಿ ಇರುತ್ತದೆ.

ದಿನಾಂಕ:24.06.2022ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಬಡ್ತಿಗೆ ಪರಿಗಣಿಸಲಾಗಿರುವ ಅಧೀಕ್ಷಕರ ಹೆಚ್ಚುವರಿ ಪಟ್ಟಿಯಲ್ಲಿ 04 ಅರ್ಹ ಅಧೀಕ್ಷಕರುಗಳಿಗೆ ಬಡ್ತಿ ಮಂಜೂರು

ಮಾಡಲು ಬಾಕಿ ಇರುತ್ತದೆ. ಈ ಹಿನ್ನೆಲೆಯಲ್ಲಿ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಅಧೀಕ್ಷಕರುಗಳ ವೃಂದದಿಂದ ಗೆಜೆಟೆಡ್ ಮ್ಯಾನೇಜರ್ ವೃಂದಕ್ಕೆ ಬಡ್ತಿ ಹೊಂದಲು ಅರ್ಹರಿರುವ ಅಧೀಕ್ಷಕರುಗಳಿಗೆ ಗೆಜೆಟೆಡ್ ಮ್ಯಾನೇಜರ್ ಆಗಿ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಕಾಶಿಇ/25/ಮ್ಯಾ.ಬಡ್ತಿ/2021-22/ಬಸ್ಥಾವಿ, ಬೆಂಗಳೂರು, ದಿನಾಂಕ: 14.09.2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅಧೀಕ್ಷಕರುಗಳಿಗೆ ವೇತನ ಶ್ರೇಣಿ ರೂ.40900-1100-46400-1250-53900-1450-62600-1650-72500-1900-78200ರಲ್ಲಿ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಗೆಜೆಟೆಡ್ ಮ್ಯಾನೇಜರ್ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡಿ, ಅವರುಗಳ ಹೆಸರಿನ ಮುಂದೆ ಕಾಲಂ-4ರಲ್ಲಿ ನಮೂದಿಸಲಾಗಿರುವ ಕಛೇರಿ/ ಕಾಲೇಜಿನಲ್ಲಿ ಖಾಲಿ ಇರುವ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

**ರಾಜ್ಯವ್ಯಾಪಿ ಉಳಿಕೆ ಮೂಲ ವೃಂದ (ಆರ್.ಕೆ.)**

| ಕ್ರ.ಸಂ | ಹೆಸರು ಶ್ರೀ/ಶ್ರೀಮತಿ | ಕಾರ್ಯ ನಿರ್ವಹಿಸುತ್ತಿರುವ ಕಛೇರಿ/ಕಾಲೇಜು | ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ/ಕಾಲೇಜು | ಷರಾ |
|---|---|---|---|---|
| 1 | 2 | 3 | 4 | 5 |
| 1 | ಪದ್ಮನಾಭ ಜಿ | ಕೇಂದ್ರ ಕಛೇರಿ, ಬೆಂಗಳೂರು. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಾವಗಡ. | ಖಾಲಿ ಹುದ್ದೆಗೆ ಎದುರಾಗಿ |
| 2 | ಶ್ರೀನಿವಾಸ್ ಜಿ | ಕೇಂದ್ರ ಕಛೇರಿ, ಬೆಂಗಳೂರು. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೆ ಆರ್ ಪುರಂ, ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 3 | ನಾಗರಾಜ ಆರ್ | ಪ್ರಾದೇಶಿಕ ಕಛೇರಿ, ಮೈಸೂರು | ಪ್ರಾದೇಶಿಕ ಕಛೇರಿ, ಮಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 4 | ವೆಂಕಟೇಶ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೂಡ್ಲಗಿ. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊಳೆನರಸೀಪುರ. | ಖಾಲಿ ಹುದ್ದೆಗೆ ಎದುರಾಗಿ |

1. ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಈ ಆದೇಶವನ್ನು ವೆಬ್‌ಸೈಟ್‌ನಿಂದ ಪಡೆದು ಬಡ್ತಿ ಹೊಂದಿದವರನ್ನು ಬಿಡುಗಡೆಗೊಳಿಸತಕ್ಕದ್ದು.
2. ಬಡ್ತಿ ಹೊಂದಿದವರು ಸ್ಥಳನಿಯುಕ್ತಿಗೊಳಿಸಲಾದ ಕಛೇರಿ/ ಕಾಲೇಜುಗಳಲ್ಲಿ ಈ ಆದೇಶ ಪ್ರಕಟಗೊಂಡ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯನ್ನು ರದ್ದುಮಾಡಲಾಗುತ್ತದೆ. ಬಡ್ತಿಗೊಂಡ ನೌಕರರು ನಿಯಮಾನುಸಾರ ಸೇರುವಿಕೆ ಕಾಲ ಪಡೆಯಲು ಅರ್ಹರಿರುತ್ತಾರೆ.
3. ಬಡ್ತಿ ಹೊಂದಿರುವ ಅಧೀಕ್ಷಕರುಗಳ ಪೈಕಿ ಯಾರಾದರೂ ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1) ಕೇಂದ್ರ ಕಛೇರಿ / ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ/ ಮೇಲ್ಕಂಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ –ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
2) ಮೇಲ್ಕಂಡ ಮ್ಯಾನೇಜರ್‌ಗಳಿಗೆ (ಸಂಬಂಧಪಟ್ಟ ಮೇಲಧಿಕಾರಿ/ಪ್ರಾಂಶುಪಾಲರು ಮೂಲಕ)
3) ಮ್ಯಾನೇಜರ್/ಅಧೀಕ್ಷಕರು, ಸೇವಾ ವಿಭಾಗ/ ವರ್ಗಾವಣೆ & ನಿಯೋಜನೆ ವಿಭಾಗ ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4) ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಆದೇಶವನ್ನು ಇಲಾಖಾ ವೆಬ್–ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

**ಪ್ರತಿಗಳು:**

1) **ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.**
2) **ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.**
3) **ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು/ಎಲ್ಲಾ ವಿಭಾಗಗಳ ಅಧೀಕ್ಷಕರುಗಳು – ಮಾಹಿತಿಗಾಗಿ.**